# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)
## ಕಾರ್ಯಕಲಾಪಗಳ ಪಟ್ಟಿ
## ಸೋಮವಾರ, ದಿನಾಂಕ: 04ನೇ ಜುಲೈ, 2016
## (ಸಮಯ: ಬೆಳಗ್ಗೆ: 11.00 ಗಂಟೆಗೆ)

******

### 01. ಸಂತಾಪ ಸೂಚನೆಗಳು

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿಮೂರನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿಮೂರನೆಯ ಪಟ್ಟಿ

### 03. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದ ನಂತರ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

### 04. ವರದಿಗಳನ್ನೊಪ್ಪಿಸುವುದು

**ಶ್ರೀ ಗೋ. ಮಧುಸೂದನ್ (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು 2016ನೇ ಸಾಲಿನ ಹಕ್ಕುಬಾಧ್ಯತಾ ಸಮಿತಿಯ 80, 81 ಹಾಗೂ 82ನೆಯ ವರದಿಗಳನ್ನು ಒಪ್ಪಿಸುವುದು.

### 05. ವಿಶೇಷ ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಮಾನ್ಯ ಸಭಾನಾಯಕರು:–**

ದಿನಾಂಕ: 30.06.2016ರವರೆಗೆ ವಿಸ್ತರಿಸಲಾಗಿದ್ದ, "ಭೋವಿ ಮತ್ತು ವಡ್ಡರ್ ಸಮುದಾಯಗಳ ಜನರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡದಿರುವ ಬಗ್ಗೆ ಪರಿಶೀಲಿಸಲು ರಚಿಸಲಾಗಿರುವ ವಿಧಾನ ಪರಿಷತ್ತಿನ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು **ದಿನಾಂಕ: 30ನೇ ಸೆಪ್ಟಂಬರ್, 2016ರವರೆಗೆ** (3 ತಿಂಗಳವರೆಗೆ) ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

..2

## ೦6. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ರಾಮಚಂದ್ರಗೌಡ** ಅವರು ಬಡತನ ರೇಖೆಗಿಂತ ಕೆಳಗಿನ ಸಾವಿರಾರು ಕುಟುಂಬಗಳಿಗೆ ಅನ್ನಭಾಗ್ಯ ಯೋಜನೆ ದೊರೆಯದಿರುವ ಬಗ್ಗೆ **ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಐವನ್ ಡಿ'ಸೋಜಾ** ಅವರು ಅಂತರ್ಜಲ ಕುಸಿತದಿಂದಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೀರಿನ ಅಭಾವ ಉಂಟಾಗಿರುವುದರಿಂದ ಅಂತರ್ಜಲ ವೃದ್ಧಿಸಲು ಇಲಾಖೆಯ ಮುಂದಿರುವ ಯೋಜನೆಗಳ ಬಗ್ಗೆ **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ** ಗಮನ ಸೆಳೆಯುವುದು.

## ೦7. ನಿಯಮ ೩೩೦ರ ಮೇರೆಗೆ

**ಅ) ಶ್ರೀ ಪುಟ್ಟಣ್ಣ** ಅವರು ರಾಜ್ಯದ ಅನುದಾನಿತ ಐ.ಟಿ.ಐ.ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಥಾಮಸ್ ರವರ ವರದಿಯಲ್ಲಿ ಮಾಡಿರುವ ಶಿಫಾರಸ್ಸುಗಳನ್ನು ಜಾರಿಗೆ ತರುವಲ್ಲಿ ವಿನಾಕಾರಣ ವಿಳಂಬ ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಾರ್ಮಿಕ ಸಚಿವರು)**

**ಆ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವೈದ್ಯರ, ಸಿಬ್ಬಂದಿಗಳ ಹಾಗೂ ಔಷಧಿಗಳ ಕೊರತೆ ಇತ್ಯಾದಿ ಸಮಸ್ಯೆಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

**ಶ್ರೀನಿವಾಸ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**